# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 899 (1139)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ವಿಷಯ : ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜ್ಯೇಷ್ಠತಾ ಪಟ್ಟಿ ಕುರಿತು

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಜ್ಯೇಷ್ಠತಾ ಪಟ್ಟಿಯಲ್ಲಿರುವ ಗೊಂದಲ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಆ) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮೂಲ ಜ್ಯೇಷ್ಠತಾ ಪಟ್ಟಿಯಲ್ಲಿ ಗೊಂದಲವಿದ್ದರೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಬಡ್ತಿ ನೀಡಲಾಗಿದೆಯೇ ; (ವಿವರ ನೀಡುವುದು) ನಿಯಮ 32ರ ಮೇರೆಗೆ ನೀಡಲಾಗಿರುವುದು ಎಷ್ಟು ; (ವಿವರ ನೀಡುವುದು)

(ಇ) ಸರ್ಕಾರದ ಇತರೆ ಇಲಾಖೆಯಡಿಯಲ್ಲಿ ಜ್ಯೇಷ್ಠತಾ ಪಟ್ಟಿಯಲ್ಲಿ ಗೊಂದಲವಿರುವ ಕಾರಣದಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆಡಳಿತ ಮತ್ತು ಸಿಬ್ಬಂದಿ ಸುಧಾರಣೆ ಇಲಾಖೆಯ ಆದೇಶವನ್ನು ಉಲ್ಲೇಖಿಸಿ ನಿಯಮ 32 ರಡಿಯಲ್ಲಿ ಪ್ರಭಾರದಲ್ಲಿರಿಸಿ ತಾತ್ಕಾಲಿಕ (ನಿಬಂಧನೆಗೊಳಪಟ್ಟ) ಪದೋನ್ನತಿ ನೀಡಿರುವ ಮಾದರಿಯಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯಡಿಯಲ್ಲಿ ಖಾಲಿ ಇರುವ ಸಹಾಯಕ ನಿರ್ದೇಶಕರ ಹುದ್ದೆಗೆ ಪದೋನ್ನತಿ ನೀಡಲು ಸರ್ಕಾರಕ್ಕೆ ಇರುವ ತೊಡಕುಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಮಾನ್ಯ ಉಚ್ಛ ನ್ಯಾಯಾಲಯದಿಂದ ಪ್ರಕರಣ WP26196/2019 ರ ಪ್ರಕಾರ ನೀಡಿರುವ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆಯಡಿಯಲ್ಲಿ ಇರುವ ಜ್ಯೇಷ್ಠತಾ ಪಟ್ಟಿಯಲ್ಲಿ ಯಥಾಸ್ಥಿತಿ (Status Quo) ಕಾಪಾಡುವಂತೆ ಸೂಚನೆ ನೀಡಲಾಗಿದೆಯೇ; ನೀಡಿದ್ದಲ್ಲಿ, ಸದರಿ ಆದೇಶದನ್ವಯ ಅರ್ಹ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿಬಂಧನೆಗೊಳಪಟ್ಟ ನಿಯಮ 32 ರಡಿಯಲ್ಲಿ ಸಹಾಯಕ ನಿರ್ದೇಶಕರ ಹುದ್ದೆಗೆ ಪದೋನ್ನತಿ ನೀಡಲು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)